ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.
ಸಿ.ಸಿ.1418/2021

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಚಂದ್ರಯ್ಯ | ಪಿ.ಡಬ್ಲ್ಯೂ.5 |
| ತಂದೆಯ ಹೆಸರು | : | ಭೈರಯ್ಯ | ಸಿ.ಡಬ್ಲ್ಯೂ.15 |
| ವಯಸ್ಸು | : | 51 ವರ್ಷ | |
| ವೃತ್ತಿ | : | ಹೆಚ್.ಸಿ.ನಂ.222, ಆಲ್ದೂರು ಪೊಲೀಸ್ ಠಾಣೆ, | |
| ವಾಸ | : | ಆಲ್ದೂರು | |

ದಿನಾಂಕಃ 03-12-2024 ರಂದು ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಸಾಕ್ಷಿ ಸ್ವತಃ-

ನಾನು ದಿಃ04.09.2017 ರಿಂದ ದಿಃ26.07.2024 ರವರೆಗೆ ಚಿಕ್ಕಮಗಳೂರಿನ ನಗರ ಪೊಲೀಸ್ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ02.11.2019 ರಂದು ನಾನು ಠಾಣೆಯಲ್ಲಿ ಹಗಲು ಪಾಳ್ಯದಲ್ಲಿ ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ರಾತ್ರಿಃ08.30 ಗಂಟೆಗೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ಆರೋಪಿ, ಮಾಲು, ಮಹಜರ್ ಮತ್ತು ವರದಿಯನ್ನ ಹಾಜರು ಮಾಡಲಾಗಿ ಅವುಗಳನ್ನ ಸ್ವೀಕರಿಸಿ ಠಾಣಾ ಮೊಕದಮೆ ಸಂಖ್ಯೆಃ175/2019 ರಂತೆ 20(ಬಿ)(1) ಎನ್.ಡಿ.ಪಿ.ಎಸ್ ಕಾಯ್ದೆಯ ಅಡಿ

ದಾಖಲು ಮಾಡಿ ಪ್ರ.ವ. ವರದಿಯನ್ನ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಗೆ ವರದಿಯನ್ನ ತೋರಿಸಲಾಗಿ ಅದರ ಮೇಲೆ ಇರುವ ತನ್ನ ಸಹಿಯನ್ನ ನೋಡಿ ಗುರುತಿಸಿದ್ದಾರೆ. ಅದನ್ನು ಈಗಾಗಲೇ ನಿಪಿ-18 ಎಂದು ಗುರುತಿಸಲಾಗಿದ್ದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-18(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಪ್ರ.ವ. ವರದಿಯನ್ನ ತೋರಿಸಲಾಗಿ ಅದರ ಮೇಲೆ ಇರುವ ತನ್ನ ಸಹಿಯನ್ನ ನೋಡಿ ಗುರುತಿಸಿದ್ದಾರೆ. ಅದನ್ನು ನಿಪಿ-20 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-20(ಎ) ಎಂದು ಗುರುತಿಸಲಾಯಿತು. ಅದೇ ದಿನ ನನ್ನ ಮುಂದೆ ಹಾಜರು ಮಾಡಿದ ಮಾಲನ್ನ ಮಾಲುಪಟ್ಟಿಗೆ ಅಳವಡಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಆರೋಪಿಯನ್ನ ದಸ್ತಗಿರಿ ಕ್ರಮಕ್ಕೆ ಅನುಗುಣವಾಗಿ ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ನಂತರ ಈ ಪ್ರಕರಣದ ಕಡತವನ್ನ ಮುಂದಿನ ತನಿಖೆಗಾಗಿ ಚಾಸಾ-16 ರವರಿಗೆ ವಹಿಸಿಕೊಟ್ಟೆ. ಆರೋಪಿಯನ್ನ ನೋಡಿದರೆ ಗುರುತಿಸುತ್ತೇನೆ. ಈ ದಿನ ಆರೋಪಿ ನ್ಯಾಯಾಲಯದ ಮುಂದೆ ಗೈರು ಹಾಜರಿದ್ದು ಸಾಕ್ಷಿ ಆರೋಪಿಯನ್ನ ಗುರುತಿಸಲು ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ಅರ್ಜಿ ಸಲ್ಲಿಸಿರುತ್ತಾರೆ. ನನ್ನ ಮುಂದೆ ಹಾಜರು ಮಾಡಿದ ಮಾಲು ನ್ಯಾಯಾಲಯದ ಮುಂದೆ ಇದ್ದು ಅದನ್ನ ನೋಡಿ ಗುರುತಿಸಿದ್ದೇನೆ. ಅದನ್ನ ಈಗಾಗಲೇ ಮು.ಮಾ.1 ಎಂದು ಗುರುತಿಸಲಾಗಿದೆ.

<u>ಪಾಟೀ ಸವಾಲುಃ ಆರೋಪಿಗಳ ಪರಃ ಶ್ರೀ ಎ.ಎಂ.ಕೆ.ವಕೀಲರಿಂದಃ-</u>

ನನ್ನ ಮೇಲಾಧಿಕಾರಿಗಳ ಮಾತು ಕೇಳಿ ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದೇನೆಯೇ ಹೊರತು ಈ ಪ್ರಕರಣದ ಬಗ್ಗೆ ನನಗೆ

ಏನೂ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೂ ಮತ್ತು ಮು.ಮಾ.ಗಳಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಪ್ರಕರಣ ದಾಖಲು ಮಾಡುವ ಕಾಲಕ್ಕೆ ನನ್ನ ಮುಂದೆ ಹಾಜರು ಮಾಡಿದೆ ಎಂದು ಹೇಳಲಾದ ಮಾಲು ಎಷ್ಟು ತೂಕ ಇತ್ತು ಎಂದು ತಪಾಸಣೆಗೆ ಒಳಪಡಿಸಿಲ್ಲ. ಆರೋಪಿತರನ್ನ ಈ ಪ್ರಕರಣದಲ್ಲಿ ಸುಳ್ಳಾಗಿ ಸೇರ್ಪಡೆ ಮಾಡಲಾಗಿದೆ ಎಂದರೆ ಸರಿಯಲ್ಲ.

<u>ಮರು ಸವಾಲುಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ